ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/02/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:05-01-2022.

ಸುತ್ತೋಲೆ

ವಿಷಯ: **"omicron virus/ covid-19** ರೋಗನಿಮಿತ್ತ ಇಲಾಖೆಯ ವ್ಯಾಪ್ತಿಗೆ ಒಳಪಡುವ ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಆಫ್-ಲೈನ್ ತರಗತಿಗಳನ್ನು ಸ್ಥಗಿತಗೊಳಿಸುವ ಕುರಿತು.

ಉಲ್ಲೇಖ:- ಸರ್ಕಾರದ ಮುಖ್ಯಕಾರ್ಯದರ್ಶಿಗಳ ಪತ್ರ ಸಂ. ಆರ್‌ಡಿ 158 ಟಿಎನ್‌ಆರ್ 2020, ದಿ:04-01-2022.

****

ರಾಜ್ಯದಲ್ಲಿ **"omicron virus / covid-19** ರೋಗವು ಸಾಂಕ್ರಾಮಿಕವಾಗಿ ಹರಡುತ್ತಿದ್ದು ರೋಗವನ್ನು ತಡಗಟ್ಟುವ ಹಾಗೂ ವಿದ್ಯಾರ್ಥಿಗಳ ಆರೋಗ್ಯದ ಮುಂಜಾಗ್ರತಾ ಕ್ರಮವಾಗಿ ಉಲ್ಲೇಖಿತ ಪತ್ರದಲ್ಲಿ ಆದೇಶಿಸಿರುವಂತೆ ಇಲಾಖೆಯ ವ್ಯಾಪ್ತಿಗೆ ಒಳಪಡುವ ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ **ದಿನಾಂಕ:06-01-2022 ರಿಂದ 19-01-2022**ರ ವರೆಗೆ ಆಫ್-ಲೈನ್ ತರಗತಿಗಳನ್ನು ಸ್ಥಗಿತಗೊಳಿಸಿ ರಜೆಯನ್ನು ನೀಡಲಾಗಿದೆ.

ಮುಂದುವರೆದು, ಮೇಲ್ಕಂಡ ಅವಧಿಯಲ್ಲಿ ಸಂಸ್ಥೆಗಳ ಎಲ್ಲಾ ಬೋಧಕ, ಬೋಧಕೇತರ ಹಾಗೂ ಕಛೇರಿ ಸಿಬ್ಬಂದಿ ವರ್ಗದವರು ಎಂದಿನಂತೆ ಕರ್ತವ್ಯಕ್ಕೆ ಹಾಜರಾಗಿ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮುಖಾಂತರ ಬೋಧನಾ ಕಾರ್ಯ ಹಾಗೂ ಪಾಲಿಟೆಕ್ನಿಕ್‌ನ ಇತರೆ ಕಾರ್ಯವನ್ನು ನಿರ್ವಹಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ಉಳಿದಂತೆ, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜುಗಳು ಉಲ್ಲೇಖಿತ ಪತ್ರದಲ್ಲಿನ ಆದೇಶದಂತೆ ಕ್ರಮವಹಿಸುವುದು.

ಕರದು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು.

ಇವರಿಗೆ,

ಇಲಾಖಾ ವ್ಯಾಪ್ತಿಯ ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

Scanned with CamScanner